**ಪ್ರಧಾನ  ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ರವರ ನ್ಯಾಯಾಲಯ, ಚಳ್ಳಕೆರೆ.**

**ಸಿ.ಸಿ. ನಂ.1350/2023**

ಪ್ರಮಾಣ ವಚನ ಬೋಧಿಸಲಾಯಿತು.

| | | | |
|---|---|---|---|
| ಹೆಸರು | : | ನಾಗರಾಜ | ಸಿ.ಡಬ್ಲ್ಯೂ–2 |
| ತಂದೆಯ  ಹೆಸರು | : | ಕ್ಯಾತಪ್ಪ | ಪಿ.ಡಬ್ಲ್ಯೂ–2 |
| ವಯಸ್ಸು | : | 50 ವರ್ಷ | |
| ಉದ್ಯೋಗ | : | ವ್ಯವಸಾಯ | |
| ವಾಸಸ್ಥಳ | : | ಚಳ್ಳಕೆರೆ | ದಿಃ 26–03–2026. |

**ಮುಖ್ಯ ವಿಚಾರಣೆ: ಮಾನ್ಯ ಎ.ಪಿ.ಪಿ. ರವರಿಂದಃ**

ಚಾಸಾ–1 ನನ್ನ ಹೆಂಡತಿ .  ಆರೋಪಿತರು ನನಗೆ ಗೊತ್ತು .

ಆರೋಪಿತರು ಎಂದಿಗೂ ಅಕ್ರಮ ಗುಂಪು ಕಟ್ಟಿಕೊಂಡು ಬಂದು ದೊಂಬಿ ಮಾಡಿರುವುದಿಲ್ಲ. ಆರೋಪಿತರು ಎಂದಿಗೂ ನನಗೆ ಮತ್ತು ಚಾಸಾ–1 ರವರನ್ನು ಅಡ್ಡಗಟ್ಟಿ ತಡೆದು ನಿಲ್ಲಿಸಿರುವುದಿಲ್ಲ. ಅವಾಚ್ಯ ಶಬ್ದಗಳಿಂದ ನಿಂದಿಸಿರುವುದಿಲ್ಲ, ಕೈಕಾಲುಗಳಿಂದ ಹಲ್ಲೆ ಮಾಡಿರುವುದಿಲ್ಲ. ಯಾವುದೇ ವಸ್ತುವಿನಿಂದ ಯಾವುದೇ ಹಲ್ಲೆ ಮಾಡಿರುವುದಿಲ್ಲ. ಚಾಸಾ–1 ರವರ ಮಾನಕ್ಕೆ ಚ್ಯುತಿ ಉಂಟಾಗುವಂತೆ ನಡೆದುಕೊಂಡಿರುವುದಿಲ್ಲ. ನಮಗೆ  ಪ್ರಾಣದ ಬೆದರಿಕೆ ಹಾಕಿರುವುದಿಲ್ಲ.  ಹಲ್ಲೆ ಕುರಿತು ನಾನು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದಿರುವುದಿಲ್ಲ. ಈ ಬಗ್ಗೆ ನಾನು ಪೊಲೀಸರಿಗೆ ಹೇಳಿಕೆಯನ್ನು ನೀಡಿಲ್ಲ.

**(ಈ ಹಂತದಲ್ಲಿ ಸಹಾಯಕ ಸರ್ಕಾರಿ ಅಭಿಯೋಜಕರು, ಸದರಿ ಸಾಕ್ಷಿಯನ್ನು  ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗಾಗಿ ಅನುಮತಿ ಕೋರಿರುತ್ತಾರೆ, ಸಾಕ್ಷಿಯ ಹೇಳಿಕೆ ಹಾಗೂ ದಾಖಲೆಗಳನ್ನು ಪರಿಶೀಲಿಸಿ  ಅನುಮತಿ ನೀಡಲಾಯಿತು)**

**ಪಾಟೀ ಸವಾಲು ಮಾನ್ಯ ಎ.ಪಿ.ಪಿ. ರವರಿಂದಃ**

ದಿನಾಂಕ 06.10.2023  ರಂದು ರಾತ್ರಿ 08–30 ಗಂಟೆ ಸಮಯದಲ್ಲಿ ನಾನು, ಚಾಸಾ–1 ರವರು ನಮ್ಮ ಮನೆಗೆ ಹೋಗಲು ಆರೋಪಿತರ ಮನೆಯ ಮುಂದೆ ಹೋಗುತ್ತಿದ್ದಾಗ ಆರೋಪಿತರೆಲ್ಲರೂ ಅಕ್ರಮವಾಗಿ ಗುಂಪು ಕಟ್ಟಿಕೊಂಡು ಬಂದು ನಮ್ಮನ್ನು ಅಡ್ಡಗಟ್ಟಿ ತಡೆದು ನಿಲ್ಲಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರೆಲ್ಲರೂ ಈ ರಸ್ತೆಯಲ್ಲಿ ಯಾಕೆ  ಓಡಾಡುತ್ತೀರಾ

ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಚಾಸಾ–1 ರವರ ಕೈ ಕಾಲುಗಳಿಂದ ಹೊಡೆದು ನೋವುಂಟು ಪಡಿಸಿರುತ್ತಾರೆ ಎಂದರೆ ಸರಿಯಲ್ಲ. 1 ನೇ ಆರೋಪಿಯು ಕೋಲಿನಿಂದ ಚಾಸಾ–1 ರವರ ಬಲಗೈಗೆ ಹೊಡೆದು ತೀವ್ರ ಸ್ವರೂಪದ ನೊಂವುಂಟು ಮಾಡಿರುತ್ತಾರೆ ಎಂದರೆ ಸರಿಯಲ್ಲ. 2 ನೇ ಆರೋಪಿಯು ಸಾರ್ವಜನಿಕ ರಸ್ತೆಯಲ್ಲಿ ಚಾಸಾ–1 ರವರ ತಲೆಕೂದಲು ಹಿಡಿದು ಎಳೆದಾಡಿ ಅವಮಾನ ಮಾಡಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿತರು ಇನ್ನೊಂದು ಬಾರಿ ಈ ರಸ್ತೆಯಲ್ಲಿ ಓಡಾಡಿದರೆ ಪ್ರಾಣ ತೆಗೆಯುವುದಾಗಿ ಪ್ರಾಣ ಬೆದರಿಕೆ ಹಾಕಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕಃ 07.10.2023 ರಂದು ಪೊಲೀಸರ ಮುಂದೆ ಈಗ ಓದಿ ಹೇಳಿದಂತೆ ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ಅಲ್ಲಗಳೆದ ಹೇಳಿಕೆಯನ್ನು ನಿಪಿ.3 ಎಂದು ಗುರುತಿಸಲಾಯಿತು.

ಪ್ರಕರಣದ ಕುರಿತು ಸಂಪೂರ್ಣ ಮಾಹಿತಿ ಇದ್ದರೂ ಕೂಡ ಈಗ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾವು ಹಾಗೂ ಆರೋಪಿತರು ರಾಜೀ ಮಾಡಿಕೊಂಡಿರುತ್ತೇವೆ ಎಂದರೆ ಸರಿ. ಅದೇ ಕಾರಣಕ್ಕೆ ಈಗ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಶ್ರೀ ಎ ಆರ್ ಕೆ., ಆರೋಪಿ ಪರ ವಕೀಲರಿಂದಃ</u>**

ಆರೋಪಿಯ ಪರ ವಕೀಲರು ಪಾಟೀ ಸವಾಲು ಇರುವುದಿಲ್ಲ ಎಂದು ನುಡಿದ ಕಾರಣ ಸದರಿ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ.ಸರಿಯಿದೆ,

ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.,
ನ್ಯಾಯಾಧೀಶರು, ಚಳ್ಳಕೆರೆ